ಕರ್ನಾಟಕ ಸರ್ಕಾರ
ನಿರ್ದೇಶಕರಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು
E-mail:commissioner.pue@gmail.com. * Ph. No.23361857, 23361858* Fax-23361852

ಸಂಖ್ಯೆ:ಪಪೂಶಿ/ಶೈಶಾ-04/ದಾ.ಸು-04/2018-19 ದಿನಾಂಕ:-21.07.2018

**ಸುತ್ತೋಲೆ**

ವಿಷಯ:-ರಾಜ್ಯದ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮಾತ್ರ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಪಿಯುಸಿಯ ದಾಖಲಾತಿಗೆ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ:-1. ಪದವಿ ಪೂರ್ವ ಶಿಕ್ಷಣ ಇಲಾಖೆಯ 2018-19ನೇ ಸಾಲಿನ ದಾಖಲಾತಿ ಕೈಪಿಡಿ ಮಾರ್ಗಸೂಚಿ.
2. ವಿದ್ಯಾರ್ಥಿಗಳ ಹಾಗೂ ಪೋಷಕರ ಮನವಿ

-----

2018-19ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳನ್ನು ಯಾವುದೇ ದಂಡ ಶುಲ್ಕ ವಿಲ್ಲದೆ ಹಾಗೂ ಈ ಹಿಂದೆ (ಮಾರ್ಚ್ 2018) ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ದಂಡಶುಲ್ಕದೊಂದಿಗೆ(ವಿಶೇಷ ದಂಡ ಶುಲ್ಕ ರೂ.2890/-) ದಾಖಲಾತಿ ಮಾಡಿಕೊಳ್ಳಲು ದಿನಾಂಕ 28.07.2018 ರವರೆಗೆ ವಿಸ್ತರಿಸಿ ನಿಯಮಾನುಸಾರ ದಾಖಲಾತಿಯನ್ನು ಮಾಡಿಕೊಳ್ಳಲು ಈ ಮೂಲಕ ತಿಳಿಸಲಾಗಿದೆ.

ದಾಖಲಾತಿ ಪಡೆದ ದಿನಾಂಕದಿಂದ ಕರ್ನಾಟಕ ಪದವಿ ಪೂರ್ವ ಶಿಕ್ಷಣ (ಶೈಕ್ಷಣಿಕ, ನೋಂದಣಿ, ಆಡಳಿತ ಮತ್ತು ಅನುದಾನಿತ ಇತ್ಯಾದಿ) ನಿಯಮಗಳು 2006 ರ ಉಪ ನಿಯಮ-12(1) ರ ಪ್ರಕಾರ ಶೇಕಡ 75% ರಷ್ಟು ಹಾಜರಾತಿಯನ್ನು ಕಾಯ್ದುಕೊಳ್ಳುವ ಷರತ್ತಿನ ಮೇಲೆ ಹಾಗೂ ವಿದ್ಯಾರ್ಥಿಯ ವಿವರಗಳನ್ನು ನಿಗದಿತ ನಮೂನೆಯಲ್ಲಿ ಭರ್ತಿಮಾಡಿ ಇಲಾಖೆಗೆ ಸಲ್ಲಿಸಲು ಸೂಚಿಸಿದೆ.

**ವಿ.ಸೂ:- 2018-19ನೇ ಸಾಲಿಗೆ ಸಂಬಂಧಿಸಿದಂತೆ, ಯಾವುದೇ ಕಾರಣಕ್ಕೂ ಪ್ರಥಮ ಪಿಯುಸಿ ದಾಖಲಾತಿ ಅವಧಿಯನ್ನು ಮತ್ತೆ ವಿಸ್ತರಣೆ ಮಾಡಲಾಗುವುದಿಲ್ಲ.**

21/7/18
ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:-

1. ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರಿಗೆ- ಮುಂದಿನ ಕ್ರಮಕ್ಕಾಗಿ
2. ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು, ಉಪನ್ಯಾಸಕರು, ವಿದ್ಯಾರ್ಥಿಗಳು, ಪೋಷಕರು ಹಾಗೂ ಸಾರ್ವಜನಿಕರ ಗಮನಕ್ಕೆ ತರಲು, ಜಿಲ್ಲಾ ಉಪನಿರ್ದೇಶಕರ ಮೂಲಕ - ಮುಂದಿನ ಕ್ರಮಕ್ಕಾಗಿ
3. ಜಂಟಿ ನಿರ್ದೇಶಕರು (ಪರೀಕ್ಷೆ/ಆಡಳಿತ/ಶೈಕ್ಷಣಿಕ/ಮಾನ್ಯತೆ/RIDF),ಪದವಿ ಪೂರ್ವ ಶಿಕ್ಷಣ ಇಲಾಖೆ -ಮಾಹಿತಿಗಾಗಿ
4. ನಿರ್ದೇಶಕರ ಆಪ್ತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ-ಮಾಹಿತಿಗಾಗಿ
5. ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ- ವೆಬ್‌ಸೈಟ್‌ನಲ್ಲಿ ಅಳವಡಿಸಲು
6. ಕಛೇರಿ ಪ್ರತಿ.